ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳಿಗೆ ಹೊಸದಾಗಿ 6ನೇ ತರಗತಿ ದಾಖಲಾತಿಗೆ ಸಂಬಂಧಿಸಿದಂತೆ ಆನ್‌ಲೈನ್ ಮುಖಾಂತರ ಅರ್ಜಿ ಆಹ್ವಾನಿಸಿರುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

61 (68) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2020-21 ನೇ ಸಾಲಿನಲ್ಲಿ ಕೋವಿಡ್-19 ರ ಹಿನ್ನಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳಿಗೆ ಹೊಸದಾಗಿ 6ನೇ ತರಗತಿ ದಾಖಲಾತಿ ಸಂಬಂಧಿಸಿದಂತೆ ಆನ್‌ಲೈನ್ ಮುಖಾಂತರ ಅರ್ಜಿ ಆಹ್ವಾನಿಸಲಾಗಿದೆಯೇ; ಆಹ್ವಾನಿಸಿದ್ದಲ್ಲಿ, ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಮಕ್ಕಳು ಅರ್ಜಿ ಸಲ್ಲಿಸಿದ್ದಾರೆ; ಹಾಗೂ ಅಂತಿಮವಾಗಿ ವಸತಿ ಶಾಲೆಗೆ ಆಯ್ಕೆಯಾದ ಮಕ್ಕಳ ವಿವರ ನೀಡುವುದು ;

(ಆ) 6 ರಿಂದ 12 ನೇ ತರಗತಿವರೆಗೆ 2020-21 ನೇ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಆನ್‌ಲೈನ್ ಅಥವಾ ಆಫ್‌ಲೈನ್ ತರಗತಿಗಳನ್ನು ಅಥವಾ ವಿದ್ಯಾಗಮದಂತಹ ಯೋಜನೆಯನ್ನು ಪ್ರಾರಂಭ ಮಾಡಿದೆಯೇ ; (ವಿವರ ನೀಡುವುದು)

(ಇ) ಸದರಿ ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ ಮತ್ತು ತಾತ್ಕಾಲಿಕ ನೌಕರರಿಗೆ ಇಲಾಖೆ ಯಾವ ಕಾರ್ಯ ಚಟುವಟಿಕೆಗಳನ್ನು ಹಂಚಿಕೆ ಮಾಡಿದೆ ; (ವಿವರ ನೀಡುವುದು)\

(ಈ) ತಾತ್ಕಾಲಿಕ ನೌಕರರಿಗೆ ಕೋವಿಡ್-19ರ ಸಂದರ್ಭದಲ್ಲಿ ವೇತನ ಪಾವತಿ ಮಾಡಲಾಗುತ್ತಿದೆಯೇ; ಪಾವತಿ ಮಾಡದಿದ್ದಲ್ಲಿ ಅವರ ಕುಟುಂಬ ನಿರ್ವಹಣೆಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲು ಮುಂದಾಗಿದೆ ; (ವಿವರ ನೀಡುವುದು)

(ಉ) ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಿರ್ವಹಣೆಯಲ್ಲಿರುವ ಮೆಟ್ರಿಕ್ ನಂತರದ ವಸತಿ ನಿಲಯಗಳಲ್ಲಿ 2020-21ನೇ ಸಾಲಿನಲ್ಲಿ ಪದವಿ ಶಿಕ್ಷಣ ಪ್ರಾರಂಭವಾದ ನಂತರ ಮಕ್ಕಳನ್ನು ವಸತಿ ನಿಲಯಕ್ಕೆ ದಾಖಲು ಮಾಡಿಕೊಳ್ಳಲಾಗಿದೆಯೇ; ಆಗಿದ್ದಲ್ಲಿ, ಎಷ್ಟು ಮಕ್ಕಳು ದಾಖಲಾಗಿದ್ದಾರೆ; ಪ್ರಸ್ತುತ ಕೋವಿಡ್ ಪರಿಸ್ಥಿತಿಯಲ್ಲಿ ಯಾವ ಮುಂಜಾಗ್ರತೆ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)